ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಅನುದಾನಿತ ಶಾಲಾ ಕಾಲೇಜುಗಳ ಸಿಬ್ಬಂದಿಗೆ ಆರೋಗ್ಯ ಸಂಜೀವಿನಿ ಯೋಜನೆ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):-

556 (692) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅನುದಾನಿತ ಶಾಲಾ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಬೋಧಕ/ಬೋಧಕೇತರರಿಗೆ ಆರೋಗ್ಯ ಜ್ಯೋತಿ ಸಂಜೀವಿನಿ ಯೋಜನೆಯಲ್ಲಿ ಸೇರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅನುದಾನಿತ ಶಾಲಾ ಕಾಲೇಜಿನ ನೌಕರರು ದೀರ್ಘ ಕಾಲದಿಂದ ಈ ಯೋಜನೆ ಸೌಲಭ್ಯದಿಂದ ವಂಚಿತರಾಗಿ, ತೊಂದರೆ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿಯವರನ್ನು ಜ್ಯೋತಿ ಸಂಜೀವಿನಿ ವ್ಯಾಪ್ತಿಗೆ ತರಲು ಇರುವ ಕಾನೂನು ತೊಡಕುಗಳೇನು ; (ವಿವರ ನೀಡುವುದು)

(ಈ) ಸದರಿಯವರನ್ನು ಜ್ಯೋತಿ ಸಂಜೀವಿನಿ ವ್ಯಾಪ್ತಿಗೆ ಯಾವ ಕಾಲಮಿತಿಯಲ್ಲಿ ಸೇರಿಸಲಾಗುವುದು ?